# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 159(270) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 12.08.2025 |
| ಉತ್ತರಿಸುವ ಸಚಿವರು | : | ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು |

<table>
<tr><th>ಕ್ರ.<br>ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ಗೊಲ್ಲಹಳ್ಳಿ ಗ್ರಾಮದ ಸರ್ವೆ ನಂ.39 ರಲ್ಲಿ ಕೆ.ಐ.ಎ.ಡಿ.ಬಿ ವತಿಯಿಂದ ಎಷ್ಟು ಎಕರೆ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆ; ಭೂ ಸ್ವಾಧೀನ ಮಾಡಿಕೊಂಡ ನಂತರ ಎಷ್ಟು ರೈತರಿಗೆ ಪರಿಹಾರ ವಿತರಿಸಲಾಗಿದೆ; ಎಷ್ಟು ರೈತರಿಗೆ ಪರಿಹಾರ ವಿತರಿಸಲಾಗಿರುವುದಿಲ್ಲ; ಪರಿಹಾರ ವಿತರಿಸದಿರಲು ಕಾರಣಗಳೇನು; (ಹೆಸರು, ಪರಿಹಾರದ ಮೊತ್ತದ ಸಂಪೂರ್ಣ ವಿವರ ನೀಡುವುದು)</td><td rowspan="3">ಗೊಲ್ಲಹಳ್ಳಿ ಗ್ರಾಮದ ಸರ್ವೆ ನಂಬರ್-39 ಮೂಲತಃ ಸರ್ಕಾರಿ ಜಮೀನಾಗಿದ್ದು, ಈ ಜಮೀನಿನಲ್ಲಿ ಒಟ್ಟು 85-00 ಎಕರೆ ಜಮೀನಿಗೆ ಕೆ.ಐ.ಎ.ಡಿ ಕಾಯ್ದೆ ಕಲಂ 3(1) ರಂತೆ ಅಧಿಸೂಚನೆ ಹೊರಡಿಸಲಾಗಿದೆ. ಸದರಿ ಜಮೀನಿಗೆ ಕೆಐಎಡಿ ಕಾಯ್ದೆ ಕಲಂ 28(1) ರಂತೆ ಪ್ರಾಥಮಿಕ ಮತ್ತು ಕಲಂ 28(4) ರಂತೆ ಅಂತಿಮ ಅಧಿಸೂಚನೆ ಹೊರಡಿಸಿರುವುದಿಲ್ಲ. ಆದ್ದರಿಂದ ಪರಿಹಾರ ಪಾವತಿಸಿರುವುದಿಲ್ಲ.<br><br>ಸರ್ವೆ ನಂ.39 ರಲ್ಲಿ 84 ಎಕರೆ 14 ಗುಂಟೆ ಸರ್ಕಾರಿ ಜಮೀನನ್ನು ಸರ್ಕಾರಕ್ಕೆ ಹಿಂತಿರುಗಿಸಲಾಗಿದೆ. ಈ ಜಮೀನನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಘನತ್ಯಾಜ್ಯ ನಿರ್ವಹಣೆಗಾಗಿ ಸರ್ಕಾರದ ಆದೇಶ ಸಂಖ್ಯೆ: ಲೋ.ಇ.438 ಸಿಆರ್‌ಎಂ 2022, ದಿನಾಂಕ: 31.01.2025 ರಂದು ಹಸ್ತಾಂತರಿಸಲಾಗಿದೆ.</td></tr>
<tr><td>ಆ)</td><td>ನೈಸ್ ಸಂಸ್ಥೆ ಎಷ್ಟು ಭೂಮಿಯನ್ನು ಸರ್ಕಾರಕ್ಕೆ ಹಿಂತಿರುಗಿಸಿದೆ; ಸದರಿ ಭೂಮಿಯನ್ನು ಯಾವ ಉದ್ದೇಶಕ್ಕೆ ಬಳಕೆ ಮಾಡಲಾಗುತ್ತದೆ;</td></tr>
<tr><td>ಇ)</td><td>ಸರ್ವೆ ನಂ.39 ಸರ್ಕಾರಿ ಭೂಮಿಯಾಗಿದ್ದು, ಹಲವು ರೈತರಿಗೆ ಭೂಮಿ ಮಂಜೂರಾಗಿ ಆರ್‌ಟಿಸಿಯಲ್ಲಿ ಹೆಸರು ದಾಖಲಿದ್ದು ಪೋಡಿಯಾಗದ ಕಾರಣ ಅವರಿಗೆ ಪರಿಹಾರ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸದರಿ ರೈತರಿಗೆ ಆಗಿರುವ ಅನ್ಯಾಯವನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?</td></tr>
</table>

| | | |
|---|---|---|
| ಈ) | ಸದರಿ ಸರ್ವೆ ನಂ.39 ರಲ್ಲಿ ಮತ್ತೊಮ್ಮೆ ಭೂ ಸ್ವಾಧೀನ ಪಡಿಸಿಕೊಳ್ಳಲು ಸರ್ಕಾರ ಉದ್ದೇಶಿಸಿದೆಯೇ; ಉದ್ದೇಶಿಸಿದ್ದರೆ ಯಾವ ಉದ್ದೇಶಕ್ಕೆ ಭೂ ಸ್ವಾಧೀನ ಮಾಡಿಕೊಳ್ಳಲಾಗುವುದು ಮತ್ತು ಎಷ್ಟು ಎಕರೆಯನ್ನು ಸ್ವಾಧೀನ ಮಾಡಿಕೊಳ್ಳಲಾಗುವುದು; ರೈತರಿಗೆ ನೀಡಲಾಗುವ ಪರಿಹಾರವೇನು; | ಗೊಲ್ಲಹಳ್ಳಿ ಗ್ರಾಮದ ಸರ್ವೆ ನಂಬರ್-39 ರ ಜಮೀನನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಘನತ್ಯಾಜ್ಯ ನಿರ್ವಹಣೆಗಾಗಿ ಈಗಾಗಲೇ ಹಸ್ತಾಂತರಿಸಿರುವುದರಿಂದ, ಮತ್ತೊಮ್ಮೆ ಭೂಸ್ವಾಧೀನಪಡಿಸುವುದಿಲ್ಲ ಹಾಗೂ ಸದರಿ ವಿಷಯವು ಕೆಐಎಡಿಬಿಗೆ ಅನ್ವಯಿಸುವುದಿಲ್ಲ. |
| ಉ) | ಭೂ ಮಂಜೂರಾದ ರೈತರ ಜಮೀನು ಪೋಡಿಯಾಗಿ ಹದ್ದುಬಸ್ತು ಆಗದ ಕಾರಣ ರೈತರಿಗೆ ಕೆ.ಐ.ಎ.ಡಿ.ಬಿ ಅಧಿಕಾರಿಗಳು ತೊಂದರೆ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕೆ.ಐ.ಎ.ಡಿ.ಬಿ ಯವರು ತಮ್ಮ ಭೂಮಿಯನ್ನು ಅಳತೆ ಮಾಡಿಸಿ ಹದ್ದುಬಸ್ತು ಮಾಡಿ, ಇತರೆ ರೈತರಿಗೆ ತೊಂದರೆ ನೀಡದಂತೆ ಮಾಡಲು ಸರ್ಕಾರ ಕೈಗೊಳ್ಳುವ ಕ್ರಮವೇನು? | |

**ಸಂಖ್ಯೆ: ಸಿಐ 456 ಐಎಪಿ 2025**

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು